**ಬಂಟ್ವಾಳ 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯದಲ್ಲಿ**

ಸಿಸಿ ನಂ. 92/2022

ಪ್ರಾಸಾ : 06

ಚಾಸಾ : 16

| | | |
|---|---|---|
| ಹೆಸರು | : | ದೇವಿದಾಸ್ |
| ತಂದೆಯ ಹೆಸರು | : | ದಿ ಕೃಷ್ಣ ಗೌಡ |
| ಪ್ರಾಯ | : | 51 ವರ್ಷ |
| ಉದ್ಯೋಗ | : | ಪೊಲೀಸ್ ಮುಖ್ಯ ಪೇದೆ, ಬಂಟ್ವಾಳ ನಗರ ಠಾಣೆ |
| ವಾಸಸ್ಥಳ | : | ಬಂಟ್ವಾಳ |

ದಿನಾಂಕಃ **04.06.2026** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

**1.** ನಾನು **2019** ರಿಂದ **2024** ವರೆಗೆ ಬಂಟ್ವಾಳ ಸಂಚಾರ ಪೊಲೀಸು ಠಾಣೆಯಲ್ಲಿ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿಃ 02.09.2021 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾ 1 ರವರು ಠಾಣೆಗೆ ಹಾಜರಾಗಿ ತಂದುಕೊಟ್ಟ ಲಿಖಿತ ದೂರನ್ನು ಸ್ವೀಕರಿಸಿಕೊಂಡು, ನಮ್ಮ ಠಾಣಾ ಅಪರಾಧ ಸಂಖ್ಯೆ 86/2021 ರಂತೆ ಪ್ರ.ವ.ವರದಿಯನ್ನು ದಾಖಲಿಸಿಕೊಂಡು, ಮಾನ್ಯ ನ್ಯಾಯಾಲಯಕ್ಕೆ ಹಾಗೂ ನನ್ನ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಯು ಸದರಿ ದೂರನ್ನು ಹಾಗೂ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ.23 ಎಂದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ23(ಎ) ಎಂದು ಗುರುತಿಸಲಾಯಿತು. ಸಾಕ್ಷಿ ಸದರಿ ಪ್ರ.ವ.ವರದಿಯನ್ನು ಹಾಗೂ ಅದರಲ್ಲಿರುವ ತನ್ನ ಸಹಿಯನ್ನು ನೋಡಿ

ಗುರುತಿಸಿದ್ದು, ಅದನ್ನು ನಿಪಿ 24 ಎಂದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ 24(ಎ) ಎಂದು ಗುರುತಿಸಲಾಯಿತು. ಮುಂದಿನ ತನಿಖೆಗಾಗಿ ಪ್ರಕರಣದ ಕಡತವನ್ನು ಚಾಸಾ 17 ರವರಿಗೆ ಹಸ್ತಾಂತರಿಸಿರುತ್ತೇನೆ.

**<u>ಪಾಟೀ ಸವಾಲುಃ ಆರೋಪಿ ಪರಃ ಶ್ರೀ ಯು ಕೆ ವೈ ವಕೀಲರಿಂದಃ</u>**

3. ಚಾಸಾ 1 ರವರು ನಿ.ಪಿ.23 ದೂರನ್ನು ತಯಾರಿಸಿಕೊಂಡು ಬಂದಿದ್ದರು. ಎಲ್ಲಿ ತಯಾರಿಸಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನಿ.ಪಿ. 23 ದೂರನ್ನು ಪೊಲೀಸ್ ಠಾಣೆಯಲ್ಲಿ ತಯಾರಿಸಿ ಸುಳ್ಳು ಪ್ರ.ವ.ವರದಿ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಚಾಸಾ1 ರವರು ನಿ.ಪಿ. 23 ದೂರನ್ನು ನನಗೆ ಕೊಟ್ಟಿಲ್ಲ ಎಂದರೆ ಸರಿಯಲ್ಲ. ಸುಳ್ಳು ದೂರಿಗೆ ಪೂರಕವಾಗಿ ಸುಳ್ಳು ಪ್ರ.ವ.ವರದಿ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೂ ಈ ಪ್ರಕರಣಕ್ಕೂ ಯಾವುದೇ ರೀತಿ ಸಂಬಂದ ಇಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

ನನ್ನ ಉಕ್ತಲೇಖನಾ ರೀತ್ಯಾ.ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಲಾಗಿ ಕೇಳಿ ಸರಿ ಇದೆ.

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ,

ಬಂಟ್ವಾಳ